ಶಾಖೆ / ವಿಷಯ: DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ

ದಿನಾಂಕ : DATE : 14/08/2019

# ಮಾಜಿ ಶಾಸಕ ಉಮೇಶ್ ಭಟ್ ನಿಧನ

ಬೆಂಗಳೂರು: ಅಂಕೋಲಾ ಕ್ಷೇತ್ರದ ಮಾಜಿ ಶಾಸಕರು ಹಾಗೂ ಲೋಕಶಿಕ್ಷಣ ಟ್ರಸ್ಟ್‌ನ ಮಾಜಿ ಅಧ್ಯಕ್ಷರು, ಧರ್ಮದರ್ಶಿಗಳೂ ಆಗಿದ್ದ ಉತ್ತರ ಕನ್ನಡ ಜಿಲ್ಲೆಯ ಉಮೇಶ್ ಭಟ್ (72) ಮಂಗಳವಾರ ಸಂಜೆ ನಿಧನ ಹೊಂದಿದ್ದಾರೆ.



ಸ್ನೇಹಿತರ ಮನೆಗೆ ತೆರಳಿದ್ದ ಸಂದರ್ಭದಲ್ಲಿ ಎದೆನೋವು ಕಾಣಿಸಿಕೊಂಡಿದ್ದು ತಕ್ಷಣವೇ ನಗರದ ಕೆಸಿ ಜನರಲ್ ಆಸ್ಪತ್ರೆಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದರು. ಉಮೇಶ್ ಭಟ್ ಅವರು ಪತ್ನಿ ಸವಿತಾ ಸೇರಿ ಅಪಾರ ಬಂಧು ಬಳಗ ಅಗಲಿದ್ದಾರೆ.

ಸ್ನೇಹಮಯಿ ವ್ಯಕ್ತಿತ್ವದ ಉಮೇಶ್ ಭಟ್, ಮೂಲತಃ ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಬಾವಿಕೆರೆ ಗ್ರಾಮದವರು. 1989ರಲ್ಲಿ ಅಂಕೋಲಾ ಕ್ಷೇತ್ರದಿಂದ ವಿಧಾನಸಭೆ ಪ್ರವೇಶಿಸಿದ್ದರು. ಕೆಪಿಸಿಸಿ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು.

5(A)